# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 927 |
| ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19.08.2025 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ | ರಾಜ್ಯದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಸಿಬ್ಬಂದಿ ಕೊರತೆ ಇರುವುದು ನಿಜವೇ; | ಗಣಿ ಮತ್ತು ಭೂವಿಜ್ಞಾನ ಇಲಾಖೆಯ, ಹಿರಿಯ ಭೂವಿಜ್ಞಾನಿ ಕಛೇರಿ, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 39 ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ 15 ಹುದ್ದೆಗಳು ಭರ್ತಿಯಾಗಿದ್ದು, 24 ಹುದ್ದೆಗಳು ಖಾಲಿ ಇರುತ್ತವೆ. |
| ಆ | ಸರ್ಕಾರದ ವತಿಯಿಂದ ಮಂಜೂರಾದ 39 ಹುದ್ದೆಗಳಲ್ಲಿ 27 ಹುದ್ದೆಗಳು ಭರ್ತಿಯಾಗದೇ ಖಾಲಿ ಉಳಿದಿರುವುದು ನಿಜವೇ; | |
| ಇ | ಇದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಇರುವ ಅಡಚಣೆಗಳೇನು; | ಆಡಳಿತಾತ್ಮಕ ಹಿತದೃಷ್ಟಿಯಿಂದ ಖಾಲಿಯಿರುವ ಹುದ್ದೆಗಳಿಗೆ ಅಗತ್ಯತೆಗನುಗುಣವಾಗಿ ನಿಯೋಜನೆ/ ಹೊರಗುತ್ತಿಗೆ ಆಧಾರದ ಮೇಲೆ ನಿಯುಕ್ತಿಗೊಳಿಸಿದೆ.<br><br>ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೆನೆನಿ 2024, ದಿನಾಂಕ:25.11.2024 ರನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಹೊರಡಿಸಬಾರದೆಂದು ಸೂಚಿಸಿದೆ. |
| ಈ | ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಈ ರೀತಿಯ ಅಕ್ರಮ ಮರಳು ಗಣಿಗಾರಿಕೆ ಬೆಳಕಿಗೆ ಬಂದಿದೆ ಮತ್ತು ಪ್ರತಿ ಜಿಲ್ಲೆಗೆ ಸರ್ಕಾರದ ವತಿಯಿಂದ ಹುದ್ದೆಗಳು ಮಂಜೂರಾಗಿದ್ದು, ಎಷ್ಟು ಹುದ್ದೆಗಳು ಭರ್ತಿಯಾಗಿವೆ; ಎಷ್ಟು ಹುದ್ದೆಗಳು ಖಾಲಿ ಇವೆ? (ಜಿಲ್ಲಾವಾರು, ಹುದ್ದೆವಾರು ಮಾಹಿತಿ ನೀಡುವುದು) | ರಾಜ್ಯದ 16 ಜಿಲ್ಲೆಗಳಲ್ಲಿ ಅಕ್ರಮ ಮರಳು ಗಣಿಗಾರಿಕೆ ಕಂಡು ಬಂದಿದ್ದು, ಪ್ರತಿ ಜಿಲ್ಲೆಗೆ ಮಂಜೂರಾಗಿರುವ, ಭರ್ತಿಯಾಗಿರುವ ಹಾಗೂ ಖಾಲಿಯಿರುವ ಹುದ್ದೆಗಳ ವಿವರಗಳನ್ನು (ಜಿಲ್ಲಾವಾರು/ ಹುದ್ದೆವಾರು ಮಾಹಿತಿಯನ್ನು) ಅನುಬಂಧದಲ್ಲಿ ನೀಡಿದೆ. |

ಸಿಐ -ಎಂಎಂಎನ್/223/2025

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.

